ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ

ದಿನಾಂಕ : DATE : 21/1/2021

# ಆರೋಗ್ಯ ಸೇವೆಗೆ ಹೊಸ ವಿಷನ್!

## ಕೈಗೆಟಕುವ ದರದಲ್ಲಿ ಜನರಿಗೆ ಉತ್ತಮ ಆರೋಗ್ಯ ಸೇವೆ ಒದಗಿಸಲು ವಿಷನ್ ಗ್ರೂಪ್ ರಚನೆ

## ವಿಷನ್ ಗ್ರೂಪ್‌ನಿಂದ 6 ತಿಂಗಳಲ್ಲಿ ವರದಿ | ಆರೋಗ್ಯ ಸಚಿವ ಡಾ|ಕೆ.ಸುಧಾಕರ್ ಘೋಷಣೆ

### ಯಾವ ರೀತಿ ಸೇವೆ?

1 ಪ್ರಾಥಮಿಕ, ಸಾಮುದಾಯಿಕ, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಸಂಯೋಜಿಸಿ ...ಮಟ್ಟದ ಆರೋಗ್ಯ ಸೇವೆ

2 ಪ್ರಾದೇಶವಾರು ಕಾಯಿಲೆ, ಆನುವಂಶೀಯ ಕಾಯಿಲೆ ಅಧ್ಯಯನ; ಇವುಗಳಿಗೆ ಪ್ರಾಥಮಿಕ ಕೇಂದ್ರದಲ್ಲೇ ಚಿಕಿತ್ಸೆ

3 ವರ್ಷಕ್ಕೆ ಒಮ್ಮೆಯಾದರೂ 35 ವರ್ಷ ಮೇಲ್ಪಟ್ಟವರಿಗೆ ರಕ್ತ ಪರೀಕ್ಷೆ. ಮಕ್ಕಳ ಆರೋಗ್ಯ ಕಾಪಾಡಲು ಟೆಲಿಮೆಡಿಸಿನ್

4 ಅಪಘಾತಕ್ಕೀಡಾದವರ ರಕ್ಷಣೆಗಾಗಿ ಪ್ರತಿ 50 ಕಿ.ಮೀ.ಗೆ 1 ಅಥವಾ ಜಿಲ್ಲಾ ಕೇಂದ್ರದಲ್ಲಿ 'ಟ್ರಾಮಾ ಕೇರ್ ಸೆಂಟರ್'

5 ಆಸ್ಪತ್ರೆಗಳಲ್ಲಿ ಜನರ ಡಿಜಿಟಲ್ ದಾಖಲೆ. ರಾಜ್ಯಾದ್ಯಂತ 2380 ಆ್ಯಂಬುಲೆನ್ಸ್



ಬೆಂಗಳೂರಿನ ವಿಧಾನಸೌಧದಲ್ಲಿ ಆರೋಗ್ಯ ಸಚಿವ ಡಾ.ಕೆ. ಸುಧಾಕರ್ ಅಧ್ಯಕ್ಷತೆಯಲ್ಲಿ ವಿಷನ್‌ಗ್ರೂಪ್‌ನ ಮೊದಲ ಸಭೆ ನಡೆಯಿತು. ಈ ಸಂದರ್ಭದಲ್ಲಿ ಆರೋಗ್ಯ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಜಾವೇದ್ ಅಖ್ತರ್ ಸೇರಿದಂತೆ ಇತರರು ಪಾಲ್ಗೊಂಡಿದ್ದರು.

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜ್ಯದ ಆರೋಗ್ಯ ಕ್ಷೇತ್ರದ ಆಮೂಲಾಗ್ರ ಬದಲಾವಣೆಗೆ ರಾಜ್ಯ ಸರ್ಕಾರ ತೀರ್ಮಾನಿಸಿದ್ದು, ಈ ಬಗ್ಗೆ ವರದಿ ನೀಡಲು ವಿಷನ್ ಗ್ರೂಪ್ ರಚಿಸಿದೆ. ವಿಷಯ ತಜ್ಞರನ್ನು ಒಳಗೊಂಡ ಈ ವಿಷನ್ ಗ್ರೂಪ್ 6 ತಿಂಗಳಲ್ಲಿ ಸರ್ಕಾರಕ್ಕೆ ವರದಿ ಸಲ್ಲಿಸಲಿದೆ. ಕೈಗೆಟಕುವ ದರದಲ್ಲಿ ಜನರಿಗೆ ಉತ್ತಮ ಆರೋಗ್ಯ ಸೇವೆ ಒದಗಿಸುವ ಉದ್ದೇಶ ಇರಿಸಿಕೊಂಡು ಈ ಯತ್ನಕ್ಕೆ ಸರ್ಕಾರ ಕೈಹಾಕಿದೆ. ವಿಧಾನಸೌಧದಲ್ಲಿ ವಿಷನ್ ಗ್ರೂಪ್‌ನ ಮೊದಲ ಸಭೆ ಬಳಿಕ ಸುದ್ದಿಗೋಷ್ಠಿಯಲ್ಲಿ ಆರೋಗ್ಯ ಸಚಿವ ಡಾ| ಕೆ.ಸುಧಾಕರ್ ಮಾತನಾಡಿ ಈ ವಿಷಯ ತಿಳಿಸಿದರು. 'ರಾಜ್ಯದ ಜನತೆಗೆ ಉಚಿತವಾಗಿ ಮತ್ತು ಕೈಗೆಟುಕುವ ದರದಲ್ಲಿ ಆರೋಗ್ಯ ಸೇವೆ ಒದಗಿಸುವ ಉದ್ದೇಶ ರಾಜ್ಯ ಸರ್ಕಾರದ್ದು.

↘ 11

**ಹೊಸ ಹೆಜ್ಜೆ** ಪ್ರಾಥಮಿಕ ಹಂತದಿಂದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆವರೆಗೂ ಕ್ವಾಲಿಟಿ ಸೆಲ್‌ಗೆ ಸಲಹೆ

# ಆರೋಗ್ಯ ಸೇವೆಗೆ ಹೊಸ ವಿಷನ್!

◄ ಮೊದಲ ಪುಟದಿಂದ

ಅದಕ್ಕೆ ಪೂರಕವಾಗಿ ನಿಮ್ಹಾನ್ಸ್‌ನ ಹಂಗಾಮಿ ನಿರ್ದೇಶಕ ಡಾ.ಗುರುರಾಜ್ ಅಧ್ಯಕ್ಷತೆಯಲ್ಲಿ ರಚನೆಯಾಗಿರುವ ವಿಷನ್ ಗ್ರೂಪ್‌ನ 38 ಪರಿಣತ ವೈದ್ಯರು ಸಮಗ್ರವಾಗಿ ಅಧ್ಯಯನ ನಡೆಸಿ ಸರ್ಕಾರಕ್ಕೆ ಅಗತ್ಯ ಸಲಹೆ, ಸೂಚನೆ ನೀಡಲಿದ್ದಾರೆ ಎಂದು ಹೇಳಿದರು.

'ರಾಜ್ಯದಲ್ಲಿ ಪ್ರಾಥಮಿಕ ಚಿಕಿತ್ಸಾ ಕೇಂದ್ರ, ಸಮುದಾಯ ಚಿಕಿತ್ಸಾ ಕೇಂದ್ರ, ತಾಲೂಕು ಆಸ್ಪತ್ರೆ ಮತ್ತು ಜಿಲ್ಲಾ ಆಸ್ಪತ್ರೆ, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಎಂಬ ಮೂರು ಹಂತದ ಆರೋಗ್ಯ ಸೇವೆಗಳು ಲಭ್ಯವಿದೆ. ಜತೆಗೆ 17 ವೈದ್ಯಕೀಯ ಕಾಲೇಜುಗಳಿಗೆ ಹೊಂದಿಕೊಂಡಿರುವ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳು ಇದ್ದು, ಇವುಗಳನ್ನು ಒಂದಕ್ಕೊಂದು ಸಂಪರ್ಕ ಕಲ್ಪಿಸಿ ಗುಣಮಟ್ಟದ ಆರೋಗ್ಯ ಸೇವೆ ನೀಡಲು ಚಿಂತನೆ ನಡೆಸಲಾಗಿದೆ' ಎಂದರು.

'ಪ್ರಧಾನ ಹೃದಯ ಕಾಯಿಲೆಗಳು, ಆನುವಂಶೀಯ ಕಾಯಿಲೆಗಳನ್ನು ಅಧ್ಯಯನ ಮಾಡಿ ಪ್ರಾಥಮಿಕ ಚಿಕಿತ್ಸಾ ಕೇಂದ್ರದಲ್ಲೇ ಚಿಕಿತ್ಸೆ ದೊರೆಯುವಂತೆ ಅಭಿವೃದ್ಧಿ ಪಡಿಸಬೇಕಿದೆ. ವರ್ಷದಲ್ಲಿ ಒಮ್ಮೆಯಾದರೂ 35 ವರ್ಷ ಮೇಲ್ಪಟ್ಟವರಿಗೆ ರಕ್ತ ಪರೀಕ್ಷೆ ಮಾಡುವುದು, ಸಾಂಕ್ರಾಮಿಕವಲ್ಲದ ರೋಗಗಳನ್ನು ಆರಂಭದಲ್ಲೇ ಪತ್ತೆ ಮಾಡಿ ಚಿಕಿತ್ಸೆ ನೀಡುವುದು, ಆಹಾರ ಪದ್ಧತಿ, ದೈನಂದಿನ ಚಟುವಟಿಕೆಯಲ್ಲಿ ಬದಲು ಮಾಡಿಕೊಳ್ಳಲು ಸಲಹೆ ನೀಡುವುದು ಸೇರಿದಂತೆ ಇತತೆ ವಿಚಾರಗಳ ಬಗ್ಗೆ ಚರ್ಚೆ ನಡೆಲಾಯಿತು. ವಿಷನ್ ಗ್ರೂಪ್‌ನಲ್ಲಿ ಅಲೋಪತಿ, ಆಯುಷ್ ತಜ್ಞರೂ ಇದ್ದಾರೆ. ಈ ದೊಡ್ಡ ಗ್ರೂಪ್‌ನಲ್ಲಿ ಉಪ ಸಮಿತಿಗಳನ್ನು ಮಾಡಿಕೊಂಡು ಅನೇಕ ವಿಷಯಗಳನ್ನು ಚರ್ಚೆ ಮಾಡಿ, ಸರ್ಕಾರಕ್ಕೆ ವರದಿ ಮೂಲಕ ಸಲಹೆ ನೀಡಲಿದ್ದಾರೆ ಎಂದು ತಿಳಿಸಿದರು.

**ಕ್ವಾಲಿಟಿ ಸೆಲ್:** ಆರೋಗ್ಯ ವ್ಯವಸ್ಥೆಯಲ್ಲಿ ಗುಣಾತ್ಮಕ ಬದಲಾವಣೆಗಳು ಆಗಬೇಕಿದೆ. ಈ ನಿಟ್ಟಿನಲ್ಲಿ ಗುಣಮಟ್ಟದ ಪರಿಶೀಲನಾ ಕೋಶವನ್ನು (ಕ್ವಾಲಿಟಿ ಸೆಲ್) ಪ್ರಾಥಮಿಕ ಹಂತದಿಂದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆವರೆಗೂ ಮಾಡಬೇಕು. ಹಾಗೆಯೇ ವೈದ್ಯಕೀಯ ಕಾಲೇಜುಗಳನ್ನು ನಿರ್ಮಿಸಲು ಶೇ.60ರಷ್ಟು ಕೇಂದ್ರ ಸರ್ಕಾರ ಅನುದಾನ ನೀಡುತ್ತದೆ. ಅಂತೆಯೇ ಹೊಸ ಆಸ್ಪತ್ರೆ, ವೈದ್ಯಕೀಯ ಕಾಲೇಜುಗಳಿಗೆ ಅಗತ್ಯ ಮಾನವಸಂಪನ್ಮೂಲ ಒದಗಿಸಲು ಸಹ ಶೇ.60 ಅನುದಾನ ಕೊಡಲು ಸಾಧ್ಯವೇ ಎಂಬುದರ ಬಗ್ಗೆ ಪತ್ರ ಬರೆಯುವ ಕುರಿತು ಚರ್ಚೆ ನಡೆಸಲಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಆರೋಗ್ಯ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಜಾವೇದ್ ಅಖ್ತರ್, ನಿಮ್ಹಾನ್ಸ್‌ನ ಅಂಗಾಮಿ ನಿರ್ದೇಶಕ ಡಾ. ಗುರುರಾಜ್, ಕೋವಿಡ್ ತಾಂತ್ರಿಕ ಸಲಹಾ ಸಮಿತಿ ಅಧ್ಯಕ್ಷ ಸುದರ್ಶನ್, ಆರೋಗ್ಯ ಇಲಾಖೆ ನಿರ್ದೇಶಕ ಓಂಪ್ರಕಾಶ್ ಪಟೇಲ್, ವೈದ್ಯಕೀಯ ಶಿಕ್ಷಣ ಇಲಾಖೆ ನಿರ್ದೇಶಕ ಗಿರೀಶ್, ನಿಮ್ಹಾನ್ಸ್ ವೈದ್ಯ ಡಾ.ರವಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಆರೋಗ್ಯ ಕೇಂದ್ರಕ್ಕೊಂದು ಆ್ಯಂಬುಲೆನ್ಸ್

ಪ್ರತಿ 50 ಕಿ.ಮೀ.ಗೆ ಒಂದರಂತೆ ಇಲ್ಲವೇ ಜಿಲ್ಲಾ ಮಟ್ಟದಲ್ಲಿ ಒಂದು ಟ್ರಾಮಾ ಕೇರ್ ಸೆಂಟರ್ ನಿರ್ಮಿಸಬೇಕೆಂಬ ಅಭಿಪ್ರಾಯ ಬಂದಿದೆ. ಇದರಿಂದ ಅಪಘಾತಕ್ಕೊಳಗಾದವರ ಜೀವ ರಕ್ಷಣೆ ಮಾಡಹುದು. ಮಕ್ಕಳ ಆರೋಗ್ಯ ಕಾಪಾಡಲು ಟೆಲಿಮೆಡಿಸಿನ್, ಪ್ರತಿಯೊಬ್ಬರ ಆರೋಗ್ಯದ ದಾಖಲೆಗಳು ಎಲ್ಲಾ ಆಸ್ಪತ್ರೆಗಳಲ್ಲಿ ಸಿಗುವಂತೆ ಡಿಜಿಟಲ್ ದಾಖಲಾತಿ, ರಾಜ್ಯದಲ್ಲಿ ಸುಮಾರು 2380 ಪ್ರಾಥಮಿಕ ಆರೋಗ್ಯ ಕೇಂದ್ರಗಳಿದ್ದು, ಪ್ರತಿಯೊಂದಕ್ಕೂ ತಲಾ ಒಂದು ಆ್ಯಂಬುಲೆನ್ಸ್ ಒದಗಿಸುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿದೆ ಎಂದರು.